ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಅ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:23-05-2022

**ಸುತ್ತೋಲೆ**

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:17.01.2022. ಮತ್ತು ದಿನಾಂಕ:28.01.2022.

* * * * * * *

2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗಿರುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಕಾರ್ಯಭಾರದ ಕೊರತೆ(ಶೂನ್ಯ ಕಾರ್ಯಭಾರ) ಹಾಗೂ ಇತ್ತೀಚಿಗೆ ನಡೆದ ಖಾಯಂ ಅಧ್ಯಾಪಕರ ವರ್ಗಾವಣೆ, ನಿಯೋಜನೆ ರದ್ಧತಿ ಇತ್ಯಾದಿ ಕಾರಣಗಳಿಂದ ಕಾರ್ಯಭಾರದ ಕೊರತೆಯಿಂದಾಗಿ(ಶೂನ್ಯ ಕಾರ್ಯಭಾರ) ಅತಿಥಿ ಉಪನ್ಯಾಸಕರ ಕರ್ತವ್ಯದಿಂದ ವಿಮುಖಗೊಂಡ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ವಿಷಯಗಳಲ್ಲಿ ಕಾರ್ಯಭಾರ ಲಭ್ಯವಿರುವ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ:24.05.2022 ರಂದು ವಿಶೇಷ ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು.

ವಿಷಯವಾರು ಲಭ್ಯವಿರುವ ಕಾರ್ಯಭಾರದ ವಿವರಗಳೊಂದಿಗೆ, ಅರ್ಹರಿರುವ ಅಭ್ಯರ್ಥಿಗಳ ಪಟ್ಟಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದೆ.

ವಿ.ಸೂ: ನ್ಯಾಯಾಲಯದ ಆದೇಶದ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾಲೇಜಿನಲ್ಲಿ ಮುಂದಿನ ಆದೇಶದವರೆಗೆ ಮುಂದುವರೆಯಬಹುದಾಗಿದೆ. ಸದರಿ ಅತಿಥಿ ಉಪನ್ಯಾಸಕರು ಈ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ.

23/05/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.